**(ಸಾಕ್ಷಿಯನ್ನು ದಿನಾಂಕ 24-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.)**

**ಮುಖ್ಯ ವಿಚಾರಣೆಃ ಶ್ರೀ ಎಸ್.ಎಂ.ಎನ್. ವಕೀಲರಿಂದಃ,**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಅಪಘಾತಕ್ಕೆ ಸಂಬಂಧಿಸಿದಂತೆ ಪ್ರಥಮ ವರ್ತಮಾನ ವರದಿ ನಿಪಿ-1 ಎಂದು, ದೂರು ನಿಪಿ-2 ಎಂದು, ಪಂಚನಾಮೆ ನಿಪಿ-3 ಎಂದು, ಕಚ್ಚಾ ನಕಾಶೆಯನ್ನು ನಿಪಿ-4 ಎಂದು, ದೋಷಾರೋಪಣ ಪಟ್ಟಿ ನಿಪಿ-5 ಎಂದು, ಸಿ.ಸಿ. ನಂ. 851/2020 ರ ಆದೇಶದ ಪ್ರತಿಯನ್ನು ನಿಪಿ-6 ಎಂದು, ಗಾಯದ ಪ್ರಮಾಣ ಪತ್ರವನ್ನು ನಿಪಿ-7 ಎಂದು, 4 ಡಿಸ್ಚಾರ್ಜ ಸಮ್ಮರಿಗಳನ್ನು ನಿಪಿ-8 ರಿಂದ 11 ಎಂದು, ಟ್ರಿಟ್ ಮೆಂಟ್ ಸರ್ಟಿಫಿಕೇಟನ್ನು ನಿಪಿ-12, ಅಂಗನ್ಯೂನತೆ ಪ್ರಮಾಣ ಪತ್ರವನ್ನು ರುಜುವಾತಿನ ಷರತ್ತಿಗೆ ಒಳಪಟ್ಟು ನಿಪಿ-13 ಎಂದು, 34 ಬಿಲ್ಲುಗಳನ್ನು ನಿಪಿ-14 ರಿಂದ 47 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಕೇಳಿಕೊಳ್ಳುತ್ತೇನೆ.

**ಪಾಟೀಸವಾಲುಃ 1 ನೇ ಎದುರುದಾರರು ಗೈರು ಹಾಜರಿ. ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಪಾಟೀಸವಾಲುಃ 2 ನೇ ಎದುರುದಾರರ ಪರ ವಕೀಲರಾದ ಶ್ರೀ ಎಸ್.ಎಂ. ಭಾಗ್ವತರಿಂದಃ**

ನಾನು 5 ನೇ ತರಗತಿ ಓದಿದ್ದೇನೆ. ಶಾಲಾ ದಾಖಲಾತಿಯನ್ನು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇಲ್ಲ. ಅಪಘಾತದ ಕಾಲಕ್ಕೆ ನನಗೆ 65 ಕ್ಕೂ ಹೆಚ್ಚು ವಯಸ್ಸು ಆಗಿದ್ದು, ಅದನ್ನು ಮುಚ್ಚಿಡಲು ಉದ್ದೇಶಪೂರ್ವಕವಾಗಿ ವಯಸ್ಸಿಗೆ ಸಂಬಂಧಪಟ್ಟಂತೆ ಶಾಲಾ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಪೊಲೀಸರು ನನ್ನ ವಿರುದ್ಧವು ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು ಎಂದರೆ ಸರಿ. ನನ್ನ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದು ತಪ್ಪು ಎಂದು ನಾನು ತನಿಖಾಧಿಕಾರಿಗಳ ವಿರುದ್ಧ ಮೇಲಾಧಿಕಾರಿಗೆ ದೂರು ನೀಡಿಲ್ಲ ಮತ್ತು ಖಾಸಗಿ ದೂರನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿಲ್ಲ. ನಾನು ಓಡಿಸುತ್ತಿದ್ದ ಬೈಕಿಗೆ ನಾನೇ ಮಾಲೀಕ. ನನ್ನ ಬೈಕಿಗೆ ವಿಮೆ ಇರಲಿಲ್ಲ ಮತ್ತು ಡಿ ಎಲ್ ಇರಲಿಲ್ಲ ಎಂದರೆ ಸರಿಯಲ್ಲ. ಅವುಗಳನ್ನು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇಲ್ಲ. ಅಪಘಾತದ ಕಾಲಕ್ಕೆ ನನಗೆ ಡಿ ಎಲ್ ಮತ್ತು ಇನ್ಸೂರೆನ್ಸ ಇಲ್ಲದಿದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ರಸ್ತೆಯ ಮಧ್ಯದಲ್ಲಿ ಹೋಗುತ್ತಿದ್ದೆ ಎಂದರೆ ಸರಿಯಲ್ಲ. ನಾನು ಎಡಭಾಗದಲ್ಲಿ ಹೋಗುತ್ತಿದ್ದೆ. ನಾನು ಬೈಕನ್ನು ಅತೀ ವೇಗವಾಗಿ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ರಾಂಗ್ ಸೈಡಿಗೆ ಹೋಗಿ ಎದುರಿನಿಂದ ಬರುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ಕಾರಣಕ್ಕೆ ನನ್ನ ವಿರುದ್ಧವೂ ದೊಷಾರೋಪಣಾ ಪಟ್ಟಿ ಸಲ್ಲಿಸಲಾಗಿದೆ ಎಂದರೆ ಅದು ಸುಳ್ಳು.

**ಪಿಡಬ್ಲು-1**

ಅಪಘಾತಕ್ಕೊಳಗಾದ ಮತ್ತೊಂದು ಬೈಕ್ ಸವಾರನಿಗೂ ಡಿ ಎಲ್ ಇರಲಿಲ್ಲ ಮತ್ತು ಬೈಕಿಗೆ ಎಫ್ ಸಿ ಇರಲಿಲ್ಲ ಎಂದರೆ ಸರಿಯಲ್ಲ. ಆ ಕಾರಣಕ್ಕೆ ವಿಮಾ ಕಂಪನಿ ಪರಿಹಾರ ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದಲೂ ಅಪಘಾತ ಆಗಿರುವುದರಿಂದ ನಾನು ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ತೀವ್ರ ಸ್ವರೂಪದ ಗಾಯಗಳಾಗಿಲ್ಲ ಎಂದರೆ ಸರಿಯಲ್ಲ. ಅರ್ಜಿಯಲ್ಲಿ ಹೇಳಿರುವಂತೆ ನಾನು ಒಳರೋಗಿಯಾಗಿ ಅಷ್ಟು ದಿನಗಳ ಕಾಲ ಚಿಕಿತ್ಸೆ ಪಡೆದಿಲ್ಲ ಮತ್ತು ಹಣ ಖರ್ಚಾಗಿಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಯಲ್ಲಿ ನನಗೆ ನೋಡಿಕೊಳ್ಳಲು ಜನ ಇದ್ದರು ಎಂದು ಸುಳ್ಳು ಹೇಳಿದ್ದೇನೆ ಎಂದರೆ ಸರಿಯಲ್ಲ. ನನ್ನ ಆದಾಯ ತೋರಿಸುವ ದಾಖಲೆ ಹಾಜರುಪಡಿಸಿಲ್ಲ. ನನಗೆ ದಿನಕ್ಕೆ ರೂ. 2,000/- ಆದಾಯ ಇತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಅಂಗನ್ಯೂನತೆ ಆಗಿ ಆದಾಯ ನಷ್ಟ ಉಂಟಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕೇಸಿಗೋಸ್ಕರ ವೈದ್ಯರ ಮೇಲೆ ಪ್ರಭಾವ ಬೀರಿ ಅಂಗನ್ಯೂನತೆ ಪ್ರಮಾಣ ಪತ್ರ ಪಡೆದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆಗೆ ಹಣ ಬೇಕು ಮತ್ತು ಈಗಲೂ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರಕ್ಕೋಸ್ಕರ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/-

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**